ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2096
ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ, (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 17.03.2022
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

ಕ್ರ. ಸಂ	ಪ್ರಶ್ನೆಗಳು	ಉತ್ತರಗಳು
ಅ)	ಐ.ಎಂ.ಎ ಪ್ರಕರಣದಲ್ಲಿ ಭಾಗಿಯಾಗಿ ಆರೋಪ ಹೊತ್ತಿರುವ ಎರಡು ಐಪಿಎಸ್ ಅಧಿಕಾರಿಗಳ ಪೈಕಿ ಓರ್ವ ಐಪಿಎಸ್ ಅಧಿಕಾರಿಯ ವಿರುದ್ಧ ಮಾತ್ರವೇ ಭ್ರಷ್ಟಾಚಾರ ನಿಗ್ರಹ ಕಾಯ್ದೆಯ ಅನ್ವಯ ಅಭಿಯೋಜನೆಗೆ ಒಳಪಡಿಸಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದು ಇನ್ನೋರ್ವ ಐಪಿಎಸ್ ಅಧಿಕಾರಿಯ ಕುರಿತು ಯಾವುದೇ ರೀತಿಯ ಶಿಫಾರಸ್ಸು ಮಾಡದಿರಲು ಕಾರಣವೇನು; ಈ ಕುರಿತು ಸರ್ಕಾರದ ನಿಲುವೇನು;	ಶ್ರೀ ಹೇಮಂತ್ ನಿಂಬಾಳ್ಕರ್, ಐಪಿಎಸ್ ಇವರ ವಿರುದ್ಧ ಸರ್ಕಾರದಿಂದ ಸಿಆರ್‌ಪಿಸಿ 197 ಮತ್ತು ಭ್ರಷ್ಟಾಚಾರ ನಿಗ್ರಹ ಕಾಯ್ದೆ 17(ಎ) ಅಡಿ ನೀಡಲಾಗಿದ್ದ ಮಂಜೂರಾತಿಗಳನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಲಯವು ರಿಟ್ ಅರ್ಜಿ ಸಂಖ್ಯೆ: 14014/2020 ರ ದಿನಾಂಕ: 19.03.2021 ರ ಆದೇಶದಲ್ಲಿ ರದ್ದುಗೊಳಿಸಿರುತ್ತದೆ. ಸದರಿ ಆದೇಶವನ್ನು ಮಾನ್ಯ ಸರ್ವೋಚ್ಚ ನ್ಯಾಯಲಯದಲ್ಲಿ ಮೇಲ್ಮನವಿಯ ಮೂಲಕ ಪ್ರಶ್ನಿಸಲಾಗಿದೆ. ಮಾನ್ಯ ಸರ್ವೋಚ್ಚ ನ್ಯಾಯಲಯದ ಅಂತಿಮ ಆದೇಶದ ಅನುಸಾರ ಸದರಿ ಅಧಿಕಾರಿಯವರ ವಿರುದ್ಧ ಕ್ರಮ ಕೈಗೊಳ್ಳಬೇಕಾಗಿರುತ್ತದೆ.
ಆ)	ಕೇಂದ್ರೀಯ ಆಡಳಿತ ನ್ಯಾಯ ಮಂಡಳಿಯು ಐಪಿಎಸ್ ಅಧಿಕಾರಿಗೆ ದೋಷಾರೋಪಣಾ ಪಟ್ಟಿಗೆ ಸಂಬಂಧಿಸಿದಂತೆ ಮಾಹಿತಿ ನೀಡದಿರಲು ರಕ್ಷಣಾ ಆದೇಶವನ್ನು ನೀಡಿರುತ್ತದೆಯೇ; ಕೇಂದ್ರೀಯ ಆಡಳಿತ ನ್ಯಾಯ ಮಂಡಳಿಯು ಈ ಕುರಿತು ನೀಡಿರುವ ಆದೇಶಗಳೇನು; (ಆದೇಶದ ಪ್ರತಿಯನ್ನು ಒದಗಿಸುವುದು)	ಕೇಂದ್ರೀಯ ಆಡಳಿತ ನ್ಯಾಯ ಮಂಡಳಿಯು ಈವರೆಗೂ ಯಾವುದೇ ಆದೇಶವನ್ನು ನೀಡಿರುವುದಿಲ್ಲ.

ಇ)	ಕೇಂದ್ರೀಯ ಆಡಳಿತ ನ್ಯಾಯ ಮಂಡಳಿಯು ಆರೋಪಿತ ಐಪಿಎಸ್ ಅಧಿಕಾರಿಗೆ ಯಾವುದೇ ರೀತಿಯ ರಕ್ಷಣೆ ನೀಡದಿದ್ದಲ್ಲಿ ರಕ್ಷಣಾ ಹೇಳಿಕೆಯನ್ನು ಸಲ್ಲಿಸದ ಐಪಿಎಸ್ ಅಧಿಕಾರಿಯನ್ನು ಅಮಾನತ್ತುಗೊಳಿಸಲು ಅಥವಾ ಘೋಷಿತ ಅಪರಾಧಿ ಎಂಬುದಾಗಿ ತೀರ್ಮಾನಿಸಿ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು; ಯಾವ ನ್ಯಾಯಾಲಯವು ದೋಷಾರೋಪಣಾ ಪಟ್ಟಿಗೆ ತಡೆ ಆದೇಶ ನೀಡಿದೆ? (ಪ್ರತಿಯನ್ನು ಒದಗಿಸುವುದು)	ಇಲಾಖಾ ವಿಚಾರಣೆಗೆ ಸಂಬಂಧಿಸಿದಂತೆ ಅಧಿಕಾರಿಯವರು ದೋಷಾರೋಪಣಾ ಪಟ್ಟಿಗೆ ರಕ್ಷಣಾ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ. ಅಖಿಲ ಭಾರತ ಸೇವೆಗಳು (ಶಿಸ್ತು ಮತ್ತು ಮೇಲ್ಮನವಿ) ನಿಯಮ 1969 ರಂತೆ ಮುಂದಿನ ಕ್ರಮ ಜರುಗಿಸಲಾಗುತ್ತಿದೆ.

ಸಂಖ್ಯೆ: ಇ-ಸಿಆಸುಇ 91 ಎಸ್‌ಪಿಎಸ್ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ